# ಕರ್ನಾಟಕ ಸರ್ಕಾರ

ಸಂಖ್ಯೆ:ಸಸಂಶಾ 02 ಸಿಎಸ್‌ಸಿ 2025

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನಸೌಧ,
ಡಾ.ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:16.04.2025

## ಅಧಿಕೃತ ಜ್ಞಾಪನ

**ವಿಷಯ:** ಬೆಂಗಳೂರು ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆಯ ಅನುಷ್ಠಾನ ಕುರಿತು ಇದುವರೆಗೂ ಆಗಿರುವ ಪ್ರಗತಿಯ ಹಿನ್ನೆಲೆಯಲ್ಲಿ ಹಾಗೂ ಮುಂದೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸುವ ಬಗ್ಗೆ.

**ಉಲ್ಲೇಖ:** ದಿನಾಂಕ:11.04.2025ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯ (ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ.469/2024).

***

ಬೆಂಗಳೂರು ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆಯ ಅನುಷ್ಠಾನ ಕುರಿತು ಇದುವರೆಗೂ ಆಗಿರುವ ಪ್ರಗತಿಯ ಹಿನ್ನೆಲೆಯಲ್ಲಿ ಹಾಗೂ ಮುಂದೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಈ ಕೆಳಕಂಡ ಸಚಿವರುಗಳನ್ನೊಳಗೊಂಡ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1 | **ಡಾ. ಜಿ. ಪರಮೇಶ್ವರ**<br>ಮಾನ್ಯ ಗೃಹ ಸಚಿವರು | **ಅಧ್ಯಕ್ಷರು** |
| 2 | **ಶ್ರೀ ಹೆಚ್.ಕೆ. ಪಾಟೀಲ್**<br>ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು | **ಸದಸ್ಯರು** |
| 3 | **ಶ್ರೀ ಕೆ.ಹೆಚ್. ಮುನಿಯಪ್ಪ**<br>ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು | **ಸದಸ್ಯರು** |
| 4 | **ಶ್ರೀ ಎಂ.ಬಿ. ಪಾಟೀಲ್**<br>ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು | **ಸದಸ್ಯರು** |

...2

Scanned with OKEN Scanner

| | | |
|---|---|---|
| 5 | **ಡಾ. ಹೆಚ್.ಸಿ. ಮಹದೇವಪ್ಪ**<br>ಮಾನ್ಯ ಸಮಾಜ ಕಲ್ಯಾಣ ಸಚಿವರು | **ಸದಸ್ಯರು** |
| 6 | **ಶ್ರೀ ಸತೀಶ್ ಜಾರಕಿಹೊಳಿ**<br>ಮಾನ್ಯ ಲೋಕೋಪಯೋಗಿ ಸಚಿವರು | **ಸದಸ್ಯರು** |
| 7 | **ಶ್ರೀ ಕೃಷ್ಣ ಬೈರೇಗೌಡ**<br>ಮಾನ್ಯ ಕಂದಾಯ ಸಚಿವರು | **ಸದಸ್ಯರು** |

ಈ ಸಚಿವ ಸಂಪುಟ ಉಪಸಮಿತಿಯು ಕಾನೂನು ತಜ್ಞರು ಹಾಗೂ ವಿಷಯದ ಪರಿಣಿತರೊಂದಿಗೆ ಚರ್ಚಿಸಿ ಕಾನೂನಾತ್ಮಕವಾಗಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ 2 ತಿಂಗಳೊಳಗಾಗಿ ತನ್ನ ವರದಿಯನ್ನು ನೀಡುವುದು.

ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು, 1977ರ ನಿಯಮ 13(5) ಹಾಗೂ ಸುತ್ತೋಲೆ ಸಂಖ್ಯೆ: ಸಿಎಸ್ 02 ಎಸ್‌ಸಿಎಂ 2025, ದಿನಾಂಕ:15.03.2025 ಪ್ರಕಾರ **ಲೋಕೋಪಯೋಗಿ ಇಲಾಖೆಯು** ಈ ಸಚಿವ ಸಂಪುಟ ಉಪಸಮಿತಿಗೆ ಅಗತ್ಯ ನೆರವು ನೀಡುವುದು.

ಉಪಸಮಿತಿಯ Terms of Reference ನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

19/04/25

**(ಜಿ. ಕುಮಾರಸ್ವಾಮಿ)**
ಸರ್ಕಾರದ ಅಧೀನ ಕಾರ್ಯದರ್ಶಿ
(ಸಚಿವ ಸಂಪುಟ)

19/4/25

**ಇವರಿಗೆ:**

1. ಮಾನ್ಯ ಗೃಹ ಸಚಿವರು
2. ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು
3. ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು
4. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು
5. ಮಾನ್ಯ ಸಮಾಜ ಕಲ್ಯಾಣ ಸಚಿವರು
6. ಮಾನ್ಯ ಲೋಕೋಪಯೋಗಿ ಸಚಿವರು
7. ಮಾನ್ಯ ಕಂದಾಯ ಸಚಿವರು
8. ಸರ್ಕಾರದ ಮುಖ್ಯ ಕಾರ್ಯದರ್ಶಿ
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

* * *

Scanned with OKEN Scanner